ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 955(1283)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಕಾರ್ಮಿಕ ಸಚಿವರು

ವಿಷಯ : ವಿವಿಧ ಯೋಜನೆಗಳಲ್ಲಿ ಕಾರ್ಮಿಕರಿಗೆ ನೀಡಿರುವ ಸೌಲಭ್ಯಗಳ ಬಗ್ಗೆ

(ಅ) ಮಂಡ್ಯ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ, ವಿವಿಧ ಯೋಜನೆಗಳಲ್ಲಿ ಕಾರ್ಮಿಕರಿಗೆ ನೀಡಿರುವ ಸೌಲಭ್ಯಗಳು ಯಾವುವು; (ತಾಲ್ಲೂಕುವಾರು ವಿವಿರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಈವರೆಗೆ ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿರುವ ಕಾರ್ಮಿಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕಿನ ಕಾರ್ಮಿಕ ಇಲಾಖೆಯಲ್ಲಿ ಕಾರ್ಮಿಕರ ಗುರುತಿನ ಚೀಟಿ, ಕಾರ್ಮಿಕರ ಮಕ್ಕಳಿಗೆ ವಿದ್ಯಾಭ್ಯಾಸಕ್ಕಾಗಿ ನೀಡುವ ಪ್ರೋತ್ಸಾಹಧನ ಸ್ವಯಂ ಉದ್ಯೋಗಕ್ಕಾಗಿ ನೀಡುವ ಪ್ರೋತ್ಸಾಹಧನ ಇತರೆ ಎಲ್ಲಾ ಸೌಲಭ್ಯಗಳನ್ನು ನೀಡಲು ಇಲಾಖೆಯಲ್ಲಿ ಡಿ-ಗ್ರೂಪ್ ನೌಕರರಿಂದ ಅಧಿಕಾರಿಗಳವರೆಗೂ ಲಂಚ ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ನೌಕರರು ಮತ್ತು ಅಧಿಕಾರಿಗಳ ವಿರುದ್ಧ ಕೈಗೊಂಡ ಶಿಸ್ತುಕ್ರಮವೇನು?